# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1117 |
| 2 | ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ |
| 3 | ಉತ್ತರಿಸಬೇಕಾದ ದಿನಾಂಕ | : | 20.12.2018 |
| 4 | ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು, |

| | ಪ್ರಶ್ನೆ | ಉತ್ತರ |
|---|---|---|
| ಅ) | ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಬರುವ ಜಿಲ್ಲೆಗಳಿಗೆ 371 ಜೆ ಅನ್ವಯ ವಿಶೇಷ ಅನುದಾನವನ್ನೇನಾದರೂ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ; | ಹೈದ್ರಾಬಾದ್-ಕರ್ನಾಟಕ ಪ್ರದೇಶದ ಹಿಂದುಳಿದಿರುವಿಕೆಯನ್ನು ಪರಿಗಣಿಸಿ ಭಾರತ ಸಂವಿಧಾನದ ಅನುಚ್ಛೇದ 371(ಜೆ)ಅನ್ನು ಸೇರ್ಪಡೆ ಮಾಡುವ ಮೂಲಕ ಈ ಪ್ರದೇಶವನ್ನೊಳಗೊಂಡ 6 ಜಿಲ್ಲೆಗಳಿಗೆ ವಿಶೇಷ ಸ್ಥಾನಮಾನವನ್ನು ಅನುಪಾಲಿಸುವ ಮೂಲಕ ಸರ್ಕಾರದಿಂದ ಅಧಿಸೂಚನೆ ಸಂಖ್ಯೆ: ಡಿಪಿಎಆರ್:ಪಿಎಲ್‌ಎಕ್ಸ್:2012 ದಿ:06-11-2013ರಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಕಲಬುರಗಿಯನ್ನು ಕೇಂದ್ರಸ್ಥಾನವಾಗಿ ರಚಿಸಲಾಗಿದೆ. 2013-14ನೇ ಸಾಲಿನಿಂದ ಆ ಪ್ರಾಂತ್ಯದ ಅಭಿವೃದ್ಧಿಗಾಗಿ ಸರ್ಕಾರವು ಆಯವ್ಯಯದಲ್ಲಿ ಅನುದಾನವನ್ನು ಒದಗಿಸಿ ಬಿಡುಗಡೆ ಮಾಡಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ; ಎಷ್ಟು ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಲಾಗುವುದು; | 2013-14ನೇ ಸಾಲಿನಿಂದ 2018-19ನೇ ಸಾಲಿನ (ನವೆಂಬರ್ - 2018)ವರೆಗೂ ಸರ್ಕಾರವು ರೂ.3380.00 ಕೋಟಿಗಳ ಅನುದಾನವನ್ನು ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗಿದೆ. |
| ಇ) | ಈ ಯೋಜನೆಯಡಿ ಪ್ರಸ್ತಾವನೆಯನ್ನು ಸಲ್ಲಿಸುವವರು ಯಾರು (ಸಂಪೂರ್ಣ ಮಾಹಿತಿ ನೀಡುವುದು) | ಹೈದ್ರಾಬಾದ್-ಕರ್ನಾಟಕ ಪ್ರದೇಶವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಿಂದ ಸ್ವೀಕರಿಸುವ ಪರಿಷ್ಕೃತ ಪ್ರಸ್ತಾವನೆಗಳನ್ನು ಮಂಡಳಿಯ ಜಿಲ್ಲಾ ಸಲಹಾ ಸಮಿತಿಯಲ್ಲಿ ಅನುಮೋದನೆ ಪಡೆದು ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ. |
| ಈ) | ಪ್ರಸಕ್ತ ಸಾಲಿನಲ್ಲಾದರೂ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಬರುವ ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ? | ಅನುಚ್ಛೇದ 371(ಜೆ) ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಅನುದಾನವನ್ನು ಆಯವ್ಯದಲ್ಲಿ ನಿಗದಿಪಡಿಸಿ ಬಿಡುಗಡೆ ಮಾಡುತ್ತಿದ್ದು ಮಂಡಳಿಯ ವ್ಯಾಪ್ತಿಯಡಿ ಬರುವ ಜಿಲ್ಲೆಗಳಿಗೆ ಬಿಡುಗಡೆಯಾಗುತ್ತಿದೆ. |

ಸಂಖ್ಯೆ: ಯೋಇ 114 ಹೈಕವಿ 2018

( ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ